ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಈ ಹುದ್ದೆಗಳನ್ನು ಸಾಮಾನ್ಯ ನೇಮಕಾತಿ ನಿಯಮಗಳನ್ವಯ ತುಂಬಲಾಗುವುದು. ಈ ದಿಸೆಯಲ್ಲಿ ಇಲಾಖಾ ವ್ಯಂದ ಮತ್ತು ನೇಮಕಾತಿ ನಿಯಮಗಳಿಗೆ ಅವಶ್ಯಕ ತಿದ್ದುಪಡಿ ತಂದು ಕೂಡಲೇ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಧಾರವಾಡ ಜಿಲ್ಲೆಯ ಯುವಜನ ಮೇಳಕ್ಕೆ ಖರ್ಚು ಮಾಡಿರುವ ಹಣ.

332 - ಶ್ರೀ ಅಶೋಕ್ ಎಸ್. ಕಾಟವೆ (ಹುಬ್ಬಳ್ಳಿನಗರ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಧಾರವಾಡ ಜಿಲ್ಲೆಗೆ 1995-96ನೇ ಸಾಲಿಗೆ ಯುವಜನ ಮೇಳಕ್ಕೆ ಎಂದು ಎಷ್ಟು ಖರ್ಚು ಮಾಡಲಾಗಿದೆ?

2) ಈ ಇಲಾಖೆಯಿಂದ ಧಾರವಾಡ ಜಿಲ್ಲೆಯ ಎಷ್ಟು ಯುವಕ ಹಾಗೂ ಯುವತಿ ಮಂಡಳಿಗಳಿಗೆ 1995-96ನೇ ಸಾಲಿಗೆ ಹಣ ಬಿಡುಗಡೆ ಮಾಡಲಾಗಿದೆ. ಅದರಲ್ಲಿ ಖರ್ಚಾದ ಹಣ ಎಷ್ಟು?

3) ಹುಬ್ಬಳ್ಳಿಯ ನೆಹರೂ ಕ್ರೀಡಾಂಗಣದಲ್ಲಿ ಕೈಗಾರಿಕಾ ವಸ್ತುಪ್ರದರ್ಶನ ಮಾಡಿದ್ದುದ್ದರ ಪ್ರಯುಕ್ತ ಅದರ ವ್ಯವಸ್ಥೆಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಶ್ರೀ ಅಜಯ ಕುಮಾರ್ ಸರನಾಯಕ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

1) ರೂ. 51,500.00 ಗಳು ಮಾತ್ರ

2) 1995-96ನೇ ಸಾಲಿಗೆ ಇಲ್ಲಿಯವರೆಗೆ ಯಾವುದೇ ಯುವಕ ಯುವತಿ ಮಂಡಳಿಗೆ ಹಣ ಬಿಡುಗಡೆ ಮಾಡಿರುವುದಿಲ್ಲ.

3) ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ಯಾವುದೇ ಹಣ ಬಿಡುಗಡೆ ಮಾಡಿರುವುದಿಲ್ಲ.

ಬೆಂಗಳೂರಿನಲ್ಲಿ ಹೈಟೆಕ್ ಆಸ್ಪತ್ರೆಯ ಸ್ಥಾಪನೆ

333 - ಶ್ರೀ ಆಯನೂರು ಮಂಜುನಾಥ (ಹೊಸನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಬಡವರಿಗಾಗಿ ಹೈಟೆಕ್ ಆಸ್ಪತ್ರೆಯನ್ನು ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಇದು ಯಾವಾಗ ಪ್ರಾರಂಭವಾಗುವುದು.

ಇ) ಇದಕ್ಕಾಗಿ ಇದುವರೆವಿಗೂ ಎಷ್ಟು ಹಣ ಖರ್ಚು ಮಾಡಲಾಗಿದೆ?

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಬೆಂಗಳೂರಿನಲ್ಲಿ ಬಡವರಿಗಾಗಿ ಹೈಟೆಕ್ ಆಸ್ಪತ್ರೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆ.

ಆ) ಹೈಟೆಕ್ ಆಸ್ಪತ್ರೆಯಂತಹ ಸಂಸ್ಥೆಯನ್ನು ಸ್ಥಾಪಿಸುವ ಬಗ್ಗೆ ಇರುವ ಸಾಧ್ಯತೆ ವಿಧಾನ ಕ್ರಮ ಮತ್ತು ಅಗತ್ಯತೆಗಳ ಬಗ್ಗೆ ಪರಿಶೀಲಿಸಲು ಡಾ॥ಆರ್.ಎಂ. ವರ್ಮ ಇವರ ಅಧ್ಯಕ್ಷತೆಯಲ್ಲಿ ಒಂದು ಪರಿಣಿತರ ಸಮಿತಿಯನ್ನು ರಚಿಸಿದೆ. ಈ ಸಮಿತಿಯು ವರದಿ ಬಂದ ನಂತರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಕ್ಷ-ಕಿರಣ ತಂತ್ರಜ್ಞರು ಹಾಗೂ ಕೇಂದ್ರಗಳ ಬಗ್ಗೆ.

334 - ಶ್ರೀ ಆಯನೂರು ಮಂಜುನಾಥ (ಹೊಸನಗರ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಕ್ಷ-ಕಿರಣ ತಂತ್ರಜ್ಞರು ಹಾಗೂ ಕೇಂದ್ರಗಳ ನಿಯಂತ್ರಣ ಮತ್ತು ಸುಧಾರಣೆಗೆ ರಾಜ್ಯ ಸರ್ಕಾರ ಏನಾದರೂ ಸಮಿತಿಯನ್ನು ರಚಿಸಿದೆಯೇ ಹಾಗಿದ್ದಲ್ಲಿ ಈ ಸಮಿತಿಯು ತನ್ನ ವರದಿಯನ್ನು ಸಲ್ಲಿಸಿದೆಯೇ?*

ಆ) *ರಚಿಸದಿದ್ದರೆ ಯಾವಾಗ ಸಮಿತಿಯನ್ನು ರಚಿಸಲಾಗುತ್ತಿದೆ.*

ಇ) *ಕ್ಷ-ಕಿರಣ ಸುರಕ್ಷಿತ ಬಳಕೆಗೆ ಸರ್ಕಾರ ನಿಯಾಮಾವಳಿಗಳನ್ನು ಏನಾದರೂ ರೂಪಿಸಿದೆಯೇ?*

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಇಲ್ಲ.

ಆ) ಸಮಿತಿ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇ) ಇಲ್ಲ.

ಬಡವರಿಗಾಗಿ ವೈದ್ಯಚಿಕಿತ್ಸೆ ನೀಡಲು ಅವರ್ತ ನಿಧಿ.

335 - ಶ್ರೀ ಆಯನೂರು ಮಂಜುನಾಥ್ (ಹೊಸನಗರ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಬಡಜನತೆಯ ಸಲುವಾಗಿ ವೈದ್ಯಕೀಯ ವೆಚ್ಚಭರಿಸುವ ಅವರ್ತ ನಿಧಿ ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ?*

ಆ) *ಯೋಚಿಸಿದ್ದರೆ ಇದುವರೆವಿಗೂ ಅದಕ್ಕಾಗಿ ಎಷ್ಟು ಹಣ ಕ್ರೋಢೀಕರಿಸಲಾಗಿದೆ?*

ಇ) *ಇದನ್ನು ಯಾವ ಯಾವ ವೈದ್ಯಕೀಯ ವೆಚ್ಚಕ್ಕಾಗಿ ಭರಿಸಲಾಗುವುದು?*